ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಮಿತಿ (ಭರವಸೆಗಳ ಸಮಿತಿ)

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡಪ್ರಭ

ದಿನಾಂಕ : DATE : 15/06/2019

# ಸರ್ಕಾರದ ಬಗ್ಗೆ ಬೇಸರ: ರಾಮಸ್ವಾಮಿ ರಾಜೀನಾಮೆ

ಕ.ಪ್ರ 15/6/19



ಬೆಂಗಳೂರು: ರಾಜ್ಯ ಸಮ್ಮಿಶ್ರ ಸರ್ಕಾರದ ನಡೆಯ ಬಗ್ಗೆ ಆಡಳಿತ ಪಕ್ಷದಲ್ಲಿಯೇ ಅಸಮಾಧಾನಗಳು ಹೆಚ್ಚಾಗುತ್ತಿದ್ದು, ವಿಧಾನಸಭೆಯ ಸರ್ಕಾರಿ ಭರವಸೆಗಳ ಸಮಿತಿಯ ಅಧ್ಯಕ್ಷ ಸ್ಥಾನಕ್ಕೆ ಜೆಡಿಎಸ್ ಶಾಸಕ ಎ.ಟಿ.ರಾಮಸ್ವಾಮಿ ರಾಜೀನಾಮೆ ನೀಡಿದ್ದಾರೆ. ಸರ್ಕಾರವು ನೀಡಿದ ವಿವಿಧ ಭರವಸೆ ಗಳನ್ನು ಈಡೇರಿಸುವಲ್ಲಿ ಸಕಾರಾತ್ಮಕವಾಗಿ ಸ್ಪಂದಿಸದಿರುವುದಕ್ಕೆ ಬೇಸರಗೊಂಡು ಅಧ್ಯಕ್ಷ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ ಎಂದು ಮೂಲಗಳು ಖಚಿತಪಡಿಸಿವೆ.

ಶುಕ್ರವಾರ ವಿಧಾನಸಭೆಯಲ್ಲಿ ಸರ್ಕಾರಿ ಭರವಸೆಗಳ ಸಮಿತಿಯ ಸಭೆ ನಡೆಯಿತು. ಸಭೆಯಲ್ಲಿಯೂ ಹಲವು ಭರವಸೆಗಳನ್ನು ಈಡೇರಿಸದಿರುವ ಬಗ್ಗೆ ಚರ್ಚೆ ನಡೆಯಿತು. ನೀಡಿರುವ ಆಶ್ವಾಸನೆಗಳನ್ನು ಈಡೇರಿಸದ ಕಾರಣ ಅಧ್ಯಕ್ಷ ಸ್ಥಾನದಲ್ಲಿ ಮುಂದುವರಿಯುವುದು ಯಾವುದೇ ಪ್ರಯೋಜನ ಇಲ್ಲ ಎಂದು ಅಭಿಪ್ರಾಯಪಟ್ಟು ರಾಜೀನಾಮೆ ನೀಡಿದ್ದಾರೆ ಎಂದು ಹೇಳಲಾಗಿದೆ. ಕೆರೆ ಸಂರಕ್ಷಣೆ ಮತ್ತು ಒತ್ತುವರಿ ವಿಚಾರದಲ್ಲಿ ಸಾಕಷ್ಟು ಹೋರಾಟಗಳನ್ನು ನಡೆಸಿರುವ ಎ.ಟಿ.ರಾಮಸ್ವಾಮಿ ಅವರು ಜೆಡಿಎಸ್ ಅಭ್ಯರ್ಥಿಯಾಗಿ ಅರಕಲಗೂಡು ಕ್ಷೇತ್ರದಿಂದ ಜಯಗಳಿಸಿ ಶಾಸಕರಾಗಿದ್ದಾರೆ.